ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಉಚಿತ ಡಯಾಲಿಸೀಸ್ ಕುರಿತು

ಶ್ರೀ ಆರ್. ಪ್ರಸನ್ನಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

86 (54) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಯಲ್ಲಿ ಉಚಿತವಾಗಿ ಡಯಾಲಿಸೀಸ್ ಮಾಡುವ ಯಂತ್ರವಿದೆಯೇ;

(ಆ) ರಾಜ್ಯದ ಖಾಸಗಿ ಆಸ್ಪತ್ರೆಯಲ್ಲಿ ಬಡವರಿಗೆ ಡಯಾಲಿಸೀಸ್ ಮಾಡಲು ದುಪ್ಪಟ್ಟು ದರ ನಿಗದಿಯಿಂದ ತೊಂದರೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಎಲ್ಲಾ ಆಸ್ಪತ್ರೆಗಳಲ್ಲಿ ಆಂಬ್ಯುಲೆನ್ಸ್ ವ್ಯವಸ್ಥೆ ಇದೆಯೇ; ಸದರಿ ಆಸ್ಪತ್ರೆಗಳಿಗೆ ಮಂಜೂರಾದ ವೈದ್ಯರು ಮತ್ತು ನರ್ಸ್‌ಗಳು ಹಾಗೂ ಇತರೆ ಖಾಲಿ ಇರುವ ಸಿಬ್ಬಂದಿಗಳೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)